ಅ) ಮಂಡ್ಯ ನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರ ಈವರೆಗೆ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ ಮತ್ತು ಆ) ಮಂಡ್ಯ ಜಿಲ್ಲಾ ಕ್ರೀಡಾಂಗಣ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು ಮಂಡ್ಯ ನಗರದಲ್ಲಿ ರೂ.೧,೯೫,೩೨,೦೦೦-೦೦ಗಳ ಅಂದಾಜು ವೆಚ್ಚದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಪ್ರಸ್ತಾವನೆಯನ್ನು ಕಳುಹಿಸಿದ್ದು, ಇಲಾಖೆಯ ಯೋಜನಾ ಕಾರ್ಯಕ್ರಮಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಯೋಜನೆ ಇಲ್ಲದಿರುವುದರಿಂದ, ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪರಿಶೀಲಿಸಿ ಅಲ್ಲಿಗೆ ಅನುದಾನಕ್ಕಾಗಿ ಕಳುಹಿಸಲು ಕ್ರಮ ಕೈಗೊಳ್ಳಲಾಗುವುದು.

ಮಂಡ್ಯನಗರದಲ್ಲಿ ರೋಡ್‌ಓವರ್ ಬ್ರಿಡ್ಜ್ ಅಥವಾ ಫ್ಲೈಓವರ್ ನಿರ್ಮಾಣ.

೨೮೭೩(೩೭೩೮)

ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರ ಮಧ್ಯದಲ್ಲಿ ರೈಲ್ವೆ ಹಳಿ ಹಾದು ಹೋಗುತ್ತಿದ್ದು, ಈ ರೈಲ್ವೆ ಹಳಿಗಳಿಗೆ ಅಡ್ಡಲಾಗಿರುವ ಲೆವೆಲ್ ಕ್ರಾಸಿಂಗ್‌ಗಳನ್ನು ರೈಲು ಹೋಗುವಾಗ ಪದೇ ಪದೇ ಗೇಟ್ ಮುಚ್ಚಬೇಕಾಗಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುವುದು ಸರ್ಕಾರ ಗಮನಿಸಿದೆಯೆ?

ಆ) ಈ ತೊಂದರೆ ನಿವಾರಿಸಲು ಸಾರ್ವಜನಿಕರಿಗೆ ರೋಡ್ ಓವರ್ ಬ್ರಿಡ್ಜ್ ಅಥವಾ ಫ್ಲೈ ಓವರ್ ಬ್ರಿಡ್ಜ್ ನಿರ್ಮಾಣ ಮಾಡುವ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ, ರೈಲ್ವೆ ಇಲಾಖೆ ಮತ್ತು ರೈಟ್ಸ್ (ಕನ್ಸಲ್ಟೆಂಟ್) ಸಹಯೋಗದೊಂದಿಗೆ ತಯಾರಿಸಲಾದ ಜಿಎಡಿ(ಜನರಲ್ ಅರೇಂಜ್‌ಮೆಂಟ್ ಡ್ರಾಯಿಂಗ್)ನು ನಗರಸಭೆಯಿಂದ ಅನುಮೋದನೆ ಪಡೆದು ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆಯ ನಿರ್ದೇಶನದಂತೆ ರೈಲ್ವೆ ಇಲಾಖೆಗೆ ಕಳುಹಿಸಿಕೊಡಲಾಗುವುದು.

ಸಕ್ಕರೆ ಕಾರ್ಖಾನೆಗಳಲ್ಲಿರುವ ಸಕ್ಕರೆಯ ದಾಸ್ತಾನು.

೨೮೭೪(೩೭೫೯)

ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳಲ್ಲಿ ಪ್ರಸ್ತುತ ಇರುವ ಸಕ್ಕರೆ ದಾಸ್ತಾನಿನ ಪ್ರಮಾಣವೆಷ್ಟು; ಇದರ ಮೌಲ್ಯವೆಷ್ಟು?

ಆ) ಇದರ ವಿತರಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು?

ಇ) ಸಕ್ಕರೆ ಕಾರ್ಖಾನೆಗಳು ಉತ್ಪಾದಿಸಿದ ಸಕ್ಕರೆಯ ವಿತರಣೆ ಸಕಾಲಕ್ಕೆ ಸಾಧ್ಯವಾಗದೇ ರೈತರಿಗೆ ಕೊಡಬೇಕಾದ ಕಬ್ಬಿನ ಬೆಲೆಯನ್ನು ನಿಗದಿತ ಸಮಯಕ್ಕೆ ಪಾವತಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ರೈತರಿಗೆ ಉಂಟಾಗುತ್ತಿರುವ ತೊಂದರೆಯನ್ನು ಪರಿಹರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳಲ್ಲಿ ಇರುವ ದಾಸ್ತಾನಿನ ಪ್ರಮಾಣ ದಿ:೩೦-೬-೦೧ರ ಅಂತ್ಯಕ್ಕೆ ೧೪.೦೭ ಲಕ್ಷ ಟನ್ ಇದ್ದು ಇದರ ಮೌಲ್ಯ ಸುಮಾರು